# National
# Kannada
# 17.09.2025 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ರಾಷ್ಟ್ರವ್ಯಾಪಿ 'ಸ್ವಸ್ಥ ನಾರಿ ಸಶಕ್ತ ಪರಿವಾರ್' ಅಭಿಯಾನಕ್ಕೆ ಪ್ರಧಾನಿ ನರೇಂದ್ರ ಮೋದಿ ಇಂದು ಉದ್ಘಾಟನೆ
2. ಇಂದು ಪ್ರಧಾನಿ ನರೇಂದ್ರ ಮೋದಿ ಹುಟ್ಟುಹಬ್ಬಕ್ಕೆ ಜಗತ್ತಿನ ವಿವಿಧ ಗಣ್ಯರಿಂದ ಶುಭಾಶಯ
3. ಸೇವಾಪರ್ವ್ ಕುರಿತ ದೂರದರ್ಶನದ ವಿಶೇಷ ಸರಣಿ ಕಾರ್ಯಕ್ರಮಕ್ಕೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಇಂದು ಚಾಲನೆ
4. ಹೆದ್ದಾರಿ ಯೋಜನೆಗಳ ಸಕಾಲಿಕ ಅನುಷ್ಠಾನಕ್ಕೆ ನಿಬಂಧನೆ ಬಿಗಿಗೊಳಿಸಿದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ

<><><><>

ಪ್ರಧಾನ ಮಂತ್ರಿ ನರೇಂದ್ರ ಮೋದಿ ಇಂದು ಮಧ್ಯಪ್ರದೇಶದ ಧಾರ್ ನಿಂದ ರಾಷ್ಟ್ರವ್ಯಾಪಿ ಸ್ವಸ್ಥ ನಾರಿ, ಸಶಕ್ತ ಪರಿವಾರ್ ಅಭಿಯಾನ ಮತ್ತು ಲನೇ ರಾಷ್ಟ್ರೀಯ ಪೋಷಣ್ ಮಾಹ್ ಶಿಬಿರವನ್ನು ಉದ್ಘಾಟಿಸಿದರು. ಧಾರ್ ಜಿಲ್ಲೆಯ ಭೈನ್‌ಸ್ಲಾ ಗ್ರಾಮದಲ್ಲಿ ದೇಶದ ಅತಿದೊಡ್ಡ ಪಿಎಂ ಮಿತ್ರ ಉದ್ಯಾನವನಕ್ಕೆ ಪ್ರಧಾನಿಯವರು ಅಡಿಪಾಯ ಹಾಕಿದರು. ಮಾತೃ ವಂದನ ಯೋಜನೆಯಡಿಯಲ್ಲಿ ೧೫ ಲಕ್ಷಕ್ಕೂ ಹೆಚ್ಚು ಮಹಿಳೆಯರಿಗೆ ಆರ್ಥಿಕ ಸಹಾಯವನ್ನು ಅವರು ವರ್ಗಾಯಿಸಿದರು. ರಾಜ್ಯದ ಬುಡಕಟ್ಟು ಪ್ರದೇಶಗಳಿಗಾಗಿ ಆಯೋಜಿಸಲಾದ "ಆದಿ ಸೇವಾ ಪರ್ವ್" ಕಾರ್ಯಕ್ರಮವನ್ನು ಸಹ ಅವರು ಉದ್ಘಾಟಿಸಿದರು. ಸ್ವಸ್ಥ ನಾರಿ, ಸಶಕ್ತ ಪರಿವಾರ್ ಅಭಿಯಾನದ ಅಡಿಯಲ್ಲಿ ಆಯೋಜಿಸಲಾಗುತ್ತಿರುವ ಆರೋಗ್ಯ ಶಿಬಿರಗಳಲ್ಲಿ ಮಹಿಳೆಯರು ತಮ್ಮನ್ನು ತಾವು ಪರೀಕ್ಷಿಸಿಕೊಳ್ಳುವಂತೆ ಪ್ರಧಾನಿಯವರು ಒತ್ತಾಯಿಸಿದರು.

ಧ್ವನಿ : ನರೇಂದ್ರ ಮೋದಿ (ನಾರೀ ಶಕ್ತಿ) (೩೨ ಸೆಕೆಂಡ್‌ಗಳು)

ಪಿಎಂ ಮಿತ್ರ ಉದ್ಯಾನವನದ ಬಗ್ಗೆ ಧಾರ್ ಜಿಲ್ಲೆಯ ಜನರನ್ನು ಅಭಿನಂದಿಸಿದ ಪ್ರಧಾನಿಯವರು, ಇದು ರೈತರು ಮತ್ತು ಯುವಕರಿಗೆ ಸುವರ್ಣ ಅವಕಾಶಗಳನ್ನು ಒದಗಿಸುತ್ತದೆ ಎಂದು ಹೇಳಿದರು. ಏನೇ ಖರೀದಿಸಿದರೂ, ಏನೇ ಮಾರಾಟ ಮಾಡಿದರೂ ಅದು ಭಾರತದ್ದೇ ಆಗಿರಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಮನವಿ ಮಾಡಿದರು.

<><><><>

ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಯುಕೆ ಮಾಜಿ ಪ್ರಧಾನಿ ರಿಷಿ ಸುನಕ್ ಸೇರಿದಂತೆ ವಿಶ್ವದಾದ್ಯಂತದ ನಾಯಕರು ಇಂದು ಪ್ರಧಾನಿ ನರೇಂದ್ರ ಮೋದಿ ಅವರ ೭೫ನೇ ಹುಟ್ಟುಹಬ್ಬಕ್ಕೆ ಶುಭಾಶಯ ಕೋರಿದ್ದಾರೆ. ಅಧ್ಯಕ್ಷ ಪುಟಿನ್ ತಮ್ಮ ಸಂದೇಶದಲ್ಲಿ ಪ್ರಧಾನಿ ಮೋದಿ ಅವರ "ಭಾರತ ಮತ್ತು ರಷ್ಯಾ ನಡುವಿನ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಅವರ ವೈಯಕ್ತಿಕ ಕೊಡುಗೆಯನ್ನು ಶ್ಲಾಘಿಸಿದ್ದಾರೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಮೋದಿಯವರನ್ನು ತಮ್ಮ ಒಳ್ಳೆಯ ಸ್ನೇಹಿತ ಎಂದು ಕರೆದರು.

ಇದಕ್ಕೂ ಮೊದಲು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ಪ್ರಧಾನಿ ಮೋದಿ ಅವರನ್ನು ಅಭಿನಂದಿಸಿದರು. ರಷ್ಯಾ-ಉಕ್ರೇನ್ ಯುದ್ಧವನ್ನು ಕೊನೆಗೊಳಿಸಲು ಪ್ರಧಾನಿ ಮೋದಿ ನೀಡಿದ ಬೆಂಬಲಕ್ಕೆ ಧನ್ಯವಾದ ಅರ್ಪಿಸಿದ್ದಾರೆ. ಹುಟ್ಟುಹಬ್ಬದ ಶುಭಾಶಯಗಳನ್ನು ನೀಡಿದ್ದಕ್ಕಾಗಿ ಪ್ರಧಾನಿ ಮೋದಿ ಸಾಮಾಜಿಕ ಮಾಧ್ಯಮದಲ್ಲಿ ಸರಣಿ ಪೋಸ್ಟ್‌ಗಳಲ್ಲಿ ಕೃತಜ್ಞತೆ ಸಲ್ಲಿಸಿದ್ದಾರೆ.

<><><>

ನವದೆಹಲಿಯಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಡಿಡಿ ನ್ಯಾಷನಲ್ ಮತ್ತು ಡಿಡಿ ನ್ಯೂಸ್‌ಗಾಗಿ ಸೇವಾ ಪರ್ವ್ ಕುರಿತ ವಿಶೇಷ ಸರಣಿ ಕಾರ್ಯಕ್ರಮಗಳಿಗೆ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಅವರು ಚಾಲನೆ ನೀಡಿದರು. ಪ್ರಧಾನಿ ನರೇಂದ್ರ ಮೋದಿಯವರ ಜನ್ಮದಿನವಾದ ಇಂದಿನಿಂದ ಸೇವಾ ಪರ್ವ್ ಆಚರಿಸಲಾಗುತ್ತಿದ್ದು, ಇದು ಮುಂದಿನ ತಿಂಗಳ ೨ ರವರೆಗೆ ನಡೆಯಲಿದೆ. ಭಾರತವು ಪ್ರಪಂಚದಾದ್ಯಂತ ತನ್ನ ಹೊಸ ಅಸ್ಮಿತೆಯನ್ನು ಪಡೆದಿದೆ. ಮೋದಿ ತಮ್ಮ ಜೀವನದ ಆರಂಭದಿಂದಲೂ ರಾಷ್ಟ್ರ ನಿರ್ಮಾಣಕ್ಕಾಗಿ ಯಾವಾಗಲೂ ಶ್ರಮಿಸಿದ್ದಾರೆ ಎಂದು ವೈಷ್ಣವ್ ಹೇಳಿದರು. ಪ್ರಧಾನಿ ಮೋದಿ ದೇಶದ ಜನರಿಗೆ ಸೇವೆ ಸಲ್ಲಿಸಲು ರಾಜಕೀಯವನ್ನು ಒಂದು ಮಾಧ್ಯಮವಾಗಿ ಪರಿವರ್ತಿಸಿದ್ದಾರೆ ಎಂದು ಅವರು ತಿಳಿಸಿದರು.

ಧ್ವನಿ : ಅಶ್ವಿನಿ ವೈಷ್ಣವ್ (೩೦ ಸೆಕೆಂಡ್‌ಗಳು)

ಈ ಸಂದರ್ಭದಲ್ಲಿ, ಸಮಾಚಾರ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು ಮಾತನಾಡಿ, ರಾಷ್ಟ್ರದ ಬದಲಾವಣೆ, ಪರಿವರ್ತನೆ ಮತ್ತು ರಾಷ್ಟ್ರ ನಿರ್ಮಾಣದ ಬಗ್ಗೆ ದೇಶಾದ್ಯಂತ ಕಥೆಗಳು ಬರುತ್ತಿವೆ ಎಂದು ಹೇಳಿದರು.

<><><>

ಹೆದ್ದಾರಿ ಯೋಜನೆಗಳ ಗುಣಮಟ್ಟ ಮತ್ತು ಸಕಾಲಿಕ ಅನುಷ್ಠಾನವನ್ನು ಸುಧಾರಿಸಲು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಪ್ರಸ್ತಾವನೆಗಾಗಿ ವಿನಂತಿ ನಿಬಂಧನೆಗಳನ್ನು ಬಿಗಿಗೊಳಿಸಿದೆ. ಹಣಕಾಸಿನ ಹೊಣೆಗಾರಿಕೆ ಮತ್ತು ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಲು ಬಿಡ್ಡರ್‌ಗಳು ಮೂರನೇ ವ್ಯಕ್ತಿಗಳಿಂದ ಪಡೆದ ಬಿಡ್ ಮತ್ತು ಕಾರ್ಯಕ್ಷಮತೆಯ ಭದ್ರತೆಗಳನ್ನು ಸಲ್ಲಿಸುವುದನ್ನು

ಎನ್‌ಎಚ್‌ಎಐ ನಿಷೇಧಿಸಿದೆ. ಈ ಕ್ರಮವು ಸಮರ್ಥ ಗುತ್ತಿಗೆದಾರರು ಮಾತ್ರ ಯೋಜನೆಗಳನ್ನು ಕೈಗೆತ್ತಿಕೊಳ್ಳುವುದು, ಮೇಲ್ವಿಚಾರಣೆಯನ್ನು ಸುಧಾರಿಸುವುದು ಮತ್ತು ನಿಗದಿತ ಸಮಯದೊಳಗೆ ಉತ್ತಮ-ಗುಣಮಟ್ಟದ ರಾಷ್ಟ್ರೀಯ ಹೆದ್ದಾರಿಗಳನ್ನು ತಲುಪಿಸುವುದನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ.

<><><><>

ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯವು ಇಂದಿನಿಂದ ಗಾಂಧಿ ಜಯಂತಿವರೆಗೆ ಸ್ವಚ್ಛತಾ ಹಿ ಸೇವಾ ಅಭಿಯಾನ ೨೦೨೫ ಅನ್ನು ಆಯೋಜಿಸುತ್ತಿದೆ. ಈ ಅಭಿಯಾನವನ್ನು ನವದೆಹಲಿಯ ಗುರುದ್ವಾರ ಬಾಂಗ್ಲಾ ಸಾಹಿಬ್ ಬಳಿ ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಘೋಷಿಸಿ, ಕೇಂದ್ರ ಸಚಿವರ ಸಮ್ಮುಖದಲ್ಲಿ ಸ್ವಚ್ಛತಾ ಪ್ರತಿಜ್ಞೆಯನ್ನು ಬೋಧಿಸಿದರು. ಈ ಸಂದರ್ಭದಲ್ಲಿ ಅವರು, ಸಫಾಯಿ ಮಿತ್ರ ಸುರಕ್ಷಾ ಶಿಬಿರವನ್ನು ಉದ್ಘಾಟಿಸಿದರು. ಸಫಾಯಿ ಮಿತ್ರರಿಗೆ ಸಫಾಯಿ ಕಿಟ್‌ಗಳನ್ನು ವಿತರಿಸಿ ಮಾತನಾಡಿ, ದೇಶವನ್ನು ಸ್ವಚ್ಛವಾಗಿಡಲು ಸ್ವಚ್ಛತೆಯನ್ನು ನಮ್ಮ ಜೀವನದ ಭಾಗವನ್ನಾಗಿ ಮಾಡಿಕೊಳ್ಳಬೇಕು. ಸ್ವಚ್ಛ ಭಾರತ ಮಿಷನ್ ಪ್ರಾರಂಭವಾದಾಗಿನಿಂದ, ಜನರಲ್ಲಿ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸಲಾಗಿದೆ ಆದರೆ ಅದನ್ನು ಮತ್ತಷ್ಟು ಹೆಚ್ಚಿಸಬೇಕು ಎಂದು ಅವರು ಹೇಳಿದರು.

<><><><>

ಹೊಸ ಜಿಎಸ್‌ಟಿ ಸುಧಾರಣೆಗಳು ತೆರಿಗೆಗಳನ್ನು ಕಡಿಮೆ ಮಾಡುವ ಮೂಲಕ ಸಾರ್ವಜನಿಕರ ಸುಮಾರು ಎರಡು ಲಕ್ಷ ಕೋಟಿ ರೂಪಾಯಿಗಳನ್ನು ಉಳಿಸುತ್ತದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ವಿಶಾಖಪಟ್ಟಣಂನಲ್ಲಿ ಇಂದು ನಡೆದ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳ ಕುರಿತು ಜನಸಂಪರ್ಕ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವರು, ೫% ಮತ್ತು ೧೮% ರ ಹೊಸ ಎರಡು-ಸ್ಲ್ಯಾಬ್ ತೆರಿಗೆ ವ್ಯವಸ್ಥೆಯು ಬಡವರು ಮತ್ತು ಮಧ್ಯಮ ವರ್ಗದವರಿಗೆ ಹೆಚ್ಚಿನ ಪ್ರಮಾಣದಲ್ಲಿ ಪ್ರಯೋಜನವನ್ನು ನೀಡುವ ಮೂಲಕ ಜನರ ದೈನಂದಿನ ಅಗತ್ಯ ವಸ್ತುಗಳು ಮತ್ತು ಮಹತ್ವಾಕಾಂಕ್ಷೆಯ ಸರಕುಗಳ ಮೇಲಿನ ಹೊರೆಯನ್ನು ಕಡಿಮೆ ಮಾಡುತ್ತದೆ ಎಂದು ವಿವರಿಸಿದರು. ಕೃಷಿ ಆಧುನೀಕರಣವನ್ನು ಉತ್ತೇಜಿಸುವ ಕೃಷಿ ಸಂಬಂಧಿತ ಸರಕುಗಳ ಮೇಲಿನ ತೆರಿಗೆಗಳನ್ನು ಕಡಿಮೆ ಮಾಡುವ ಮೂಲಕ ಸುಧಾರಣೆಗಳು ರೈತರ ಆದಾಯವನ್ನು ಹೆಚ್ಚಿಸುತ್ತವೆ. ಎಂಎಸ್‌ಎಂಇ ಮತ್ತು ಉದ್ಯೋಗ ಸೃಷ್ಟಿಸುವ ವಲಯಗಳು ಸಹ ಕಡಿಮೆ ವೆಚ್ಚದ ಮೂಲಕ ಪ್ರಯೋಜನ ಪಡೆಯುತ್ತವೆ, ಇದು ವರ್ಧಿತ ಅವಕಾಶಗಳನ್ನು ಒದಗಿಸುತ್ತದೆ ಎಂದು ಕೇಂದ್ರ ಸಚಿವರು ಹೇಳಿದರು. ಇದೇ ೨೨ ರಿಂದ ಜಾರಿಗೆ ಬರುವಂತೆ, ಜಿಎಸ್‌ಟಿ

ಸುಧಾರಣೆಗಳು ತೆರಿಗೆ ರಚನೆಯನ್ನು ಸರಳಗೊಳಿಸುತ್ತವೆ ಮತ್ತು ಆರ್ಥಿಕ ಬೆಳವಣಿಗೆಯನ್ನು ಬೆಂಬಲಿಸುತ್ತವೆ ಎಂದು ಅವರು ತಿಳಿಸಿದರು.

<><><>

ನವದೆಹಲಿಯಲ್ಲಿ ಇಂದು ನಡೆಯುತ್ತಿರುವ ಸೇವಾ ಪಖ್ವಾಡಾ ಅಡಿಯಲ್ಲಿ ದೆಹಲಿಗೆ ೧೬ ನೂರು ಕೋಟಿ ರೂಪಾಯಿಗಳ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸಿದರು. ತ್ಯಾಗರಾಜ್ ಕ್ರೀಡಾಂಗಣದಲ್ಲಿ ನಡೆದ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಇಂದು ಪ್ರಾರಂಭಿಸಲಾದ ಈ ಯೋಜನೆಗಳು ರಾಷ್ಟ್ರ ರಾಜಧಾನಿಯ ಜನರಿಗೆ ಪ್ರಯೋಜನವನ್ನು ನೀಡುತ್ತವೆ. ನರೇಂದ್ರ ಮೋದಿ ಅವರು ತಮ್ಮ ಇಡೀ ಜೀವನವನ್ನು ದೇಶವಾಸಿಗಳ ಕಲ್ಯಾಣಕ್ಕಾಗಿ ಮುಡಿಪಾಗಿಟ್ಟಿದ್ದಾರೆ ಎಂದು ಅವರು ಹೇಳಿದರು.

<><><>

ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ದಿವಂಗತ ತಾಯಿಯ ಬಗ್ಗೆ ಬಿಹಾರ ಕಾಂಗ್ರೆಸ್ ಪೋಸ್ಟ್ ಮಾಡಿದ್ದ ಅವಹೇಳನಕಾರಿ ಕೃತಕ ಬುದ್ಧಿಮತ್ತೆ ಆಧಾರಿತ ವೀಡಿಯೊವನ್ನು ಎಲ್ಲಾ ಸಾಮಾಜಿಕ ಮಾಧ್ಯಮ ವೇದಿಕೆಗಳಿಂದ ತೆಗೆದುಹಾಕಲು ಪಾಟ್ನಾ ಹೈಕೋರ್ಟ್ ಇಂದು ಆದೇಶಿಸಿದೆ. ಖಾಸಗಿತನ ಮತ್ತು ಘನತೆಯ ಹಕ್ಕು ವ್ಯಕ್ತಿಯ ಮೂಲಭೂತ ಹಕ್ಕುಗಳ ಭಾಗವಾಗಿದೆ ಎಂದು ಉಲ್ಲೇಖಿಸಿ ವೀಡಿಯೊದ ಪ್ರಸಾರವನ್ನು ನಿಲ್ಲಿಸುವಂತೆ ಜಾಲತಾಣಗಳಿಗೆ ನಿರ್ದೇಶನ ನೀಡಿ, ಹಂಗಾಮಿ ಮುಖ್ಯ ನ್ಯಾಯಮೂರ್ತಿ ಪಿ.ಬಿ. ಬಜಂತ್ರಿ ಮತ್ತು ನ್ಯಾಯಮೂರ್ತಿ ಅಲೋಕ್ ಕುಮಾರ್ ಸಿನ್ಹಾ ಅವರನ್ನೊಳಗೊಂಡ ಪೀಠವು ಆದೇಶ ಹೊರಡಿಸಿದೆ.

<><><>

ಭಾರತದ ಮಾರುಕಟ್ಟೆಯಲ್ಲಿ ರೋಲ್ಸ್ ರಾಯ್ಸ್ ಮಾರಾಟ ದ್ವಿಗುಣಗೊಂಡಿದ್ದು ಬೆಂಗಳೂರಿನಲ್ಲಿ ಜಾಗತಿಕ ಸಾಮರ್ಥ್ಯ ಮತ್ತು ನಾವೀನ್ಯತೆ ಕೇಂದ್ರವನ್ನು ತೆರೆಯುವುದಾಗಿ ಘೋಷಿಸಿದೆ. ಮುಂದಿನ ಐದು ವರ್ಷಗಳಲ್ಲಿ ಭಾರತದಲ್ಲಿ ತನ್ನ ಉತ್ಪಾದನೆಯನ್ನು ದ್ವಿಗುಣಗೊಳಿಸುವ ಯೋಜನೆಗಳ ಜೊತೆಗೆ, ಭಾರತೀಯ ಪೂರೈಕೆದಾರರನ್ನು ಜಾಗತಿಕ ಪೂರೈಕೆ ಸರಪಳಿಯಲ್ಲಿ ಏಕೀಕರಣವನ್ನು ವೇಗಗೊಳಿಸಲು ನಿರ್ಧರಿಸಿದೆ.

<><><>

ಚುನಾವಣಾ ಆಯೋಗವು ಇವಿಎಂ ಮತಪತ್ರಗಳ ವಿನ್ಯಾಸ ಮತ್ತು ಮುದ್ರಣ, ಅವುಗಳ ಸ್ಪಷ್ಟತೆ ಹೆಚ್ಚಿಸಲು ಚುನಾವಣಾ ನಿಯಮಗಳ ಅಡಿಯಲ್ಲಿ ಅಸ್ತಿತ್ವದಲ್ಲಿರುವ ಮಾರ್ಗಸೂಚಿಗಳನ್ನು ಪರಿಷ್ಕರಿಸಿದೆ. ಇಂದಿನಿಂದ ಅಭ್ಯರ್ಥಿಗಳ ಛಾಯಾಚಿತ್ರಗಳನ್ನು ಉತ್ತಮ ಗೋಚರತೆಗಾಗಿ ಫೋಟೋ ಜಾಗದ ನಾಲ್ಕನೇ ಮೂರು ಭಾಗದಷ್ಟು ಬಣ್ಣದಲ್ಲಿ ಮುದ್ರಿಸಲಾಗುತ್ತದೆ. ಏಕರೂಪತೆಯನ್ನು ಖಚಿತಪಡಿಸಿಕೊಳ್ಳಲು, ಎಲ್ಲಾ ಅಭ್ಯರ್ಥಿಗಳ ಹೆಸರುಗಳು ಮತ್ತು ನೋಟಾವನ್ನು ಸುಲಭವಾಗಿ ಓದಲು ಸಾಧ್ಯವಾಗುವಂತೆ ಒಂದೇ ಅಕ್ಷರ ವಿನ್ಯಾಸದಲ್ಲಿ ಮುದ್ರಿಸಲಾಗುತ್ತದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>